ಕರ್ನಾಟಕ ಸರ್ಕಾರ

ಸಂಖ್ಯೆ: ಸಕನಿ/ಸಿಬ್ಬಂದಿ-8/ಸಿಆರ್-89/2020-21

ಸಮಾಜ ಕಲ್ಯಾಣ ಆಯುಕ್ತರ ಕಛೇರಿ,
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ/18-01-2021

## ಅಧಿಕೃತ ಜ್ಞಾಪನ

ವಿಷಯ:- ಸಮಾಜ ಕಲ್ಯಾಣ ಇಲಾಖೆಯ ಜೂನಿಯರ್ ವಾರ್ಡನ್ ವೃಂದದ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ, ಉಳಿಕೆ ಮೂಲ ವೃಂದ ಹಾಗೂ ಮೂಲ ವೃಂದ (ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ ಮತ್ತು ಉಳಿಕೆ ಮೂಲ ವೃಂದಗಳ ಜಂಟಿ ವೃಂದ) ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ 01-01-2021 ರಲ್ಲಿದ್ದಂತೆ ಪ್ರಕಟಿಸುವ ಬಗ್ಗೆ

ಉಲ್ಲೇಖ:-
1) ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು 1957
2) ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ 07 ಸೆನೆನಿ 96 ದಿನಾಂಕ 16-07-96
3) ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ 32 ಸೆನೆನಿ 03 ದಿನಾಂಕ 10-06-03
4) ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 06 ಪಿಎಲ್ಎಕ್ಸ್ ದಿನಾಂಕ 06-11-2013
5) ಸರ್ಕಾರದ ಅಧಿಸೂಚನೆ-I ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013 ದಿನಾಂಕ 29-01-2014

**********

ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮ 1957 ರ ನಿಯಮ 10 ರನ್ವಯ ಪ್ರತಿ ವರ್ಷ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಬೇಕಾಗಿರುತ್ತದೆ. ಉಲ್ಲೇಖ (2) & (3) ರ ಸರ್ಕಾರದ ಅಧಿಕೃತ ಜ್ಞಾಪನಾಗಳನ್ವಯ ದಿನಾಂಕ 01-01-2021 ರಲ್ಲಿದ್ದಂತೆ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಬೇಕಾಗಿರುತ್ತದೆ.

ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸಂಬಂಧಿಸಿದಂತೆ, ಉಲ್ಲೇಖ (4) ಮತ್ತು (5) ರ ಸಿಬ್ಬಂದಿ & ಆಡಳಿತ ಸುಧಾರಣಾ ಇಲಾಖೆರವರ ಅಧಿಸೂಚನೆಗಳನ್ವಯ ಸ್ಥಳೀಯ ವೃಂದ, ಉಳಿಕೆ ಮೂಲ ವೃಂದ ಮತ್ತು ಮೂಲ ವೃಂದ (ಕಲ್ಯಾಣ ಕರ್ನಾಟಕ ಪ್ರದೇಶ ಹಾಗೂ ಉಳಿಕೆ ಮೂಲ ವೃಂದದ ಜಂಟಿ ವೃಂದ) ದ ಜೇಷ್ಠತಾ ಪಟ್ಟಿಗಳನ್ನು ಪ್ರತಿ ವೃಂದದಲ್ಲಿ ನಿರ್ವಹಿಸಬೇಕಾಗಿರುತ್ತದೆ.

ಸಮಾಜ ಕಲ್ಯಾಣ ಇಲಾಖೆಯ ಜೂನಿಯರ್ ವಾರ್ಡನ್ ವೃಂದದ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ-ಅನುಬಂಧ 1, ಉಳಿಕೆ ಮೂಲ ವೃಂದ-ಅನುಬಂಧ 2 ಹಾಗೂ ಮೂಲ ವೃಂದ (ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ ಮತ್ತು ಉಳಿಕೆ ಮೂಲ ವೃಂದಗಳ ಜಂಟಿ ವೃಂದ) ಅನುಬಂಧ-3 ರಲ್ಲಿ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ 01-01-2021 ರಲ್ಲಿದ್ದಂತೆ ಇಲಾಖಾ ವೆಬ್‌ಸೈಟ್ **www.sw.kar.nic.in** ನಲ್ಲಿ ಪ್ರಕಟಿಸಿದೆ. ಈ ತಾತ್ಕಾಲಿಕ ಜೇಷ್ಠತಾ ಪಟ್ಟಿಗಳನ್ನು ಇ-ಮೇಲ್ ಮೂಲಕ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಡಾ: ಬಿ.ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು / ಬುಡಕಟ್ಟುಗಳ ಆಯೋಗ, ಪರೀಕ್ಷಾ ಪೂರ್ವ ತರಬೇತಿ ಸಂಸ್ಥೆ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಎಲ್ಲಾ ಜಿಲ್ಲೆಗಳ ಜಂಟಿ / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಯೋಜನಾ ಸಮನ್ವಯಾಧಿಕಾರಿಗಳು, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಹಾಗೂ ಎಲ್ಲಾ ತಾಲ್ಲೂಕುಗಳ ಸಹಾಯಕ ನಿರ್ದೇಶಕರು, ಗ್ರೇಡ್-1 & 2, ಸಮಾಜ ಕಲ್ಯಾಣ ಇಲಾಖೆ ರವರುಗಳಿಗೆ ಕಳುಹಿಸಲಾಗಿದೆ.